ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/ಶೈವಿ/04/ಸುತ್ತೋಲೆ/2019-20

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು,ದಿನಾಂಕ:13-03-2020

# ಸುತ್ತೋಲೆ

**ವಿಷಯ:** Corona Virus ರೋಗ ನಿಮಿತ್ತ ಸರ್ಕಾರಿ/ಖಾಸಗಿ ಅನುದಾನಿತ ಕಾಲೇಜುಗಳಿಗೆ ರಜೆ ಘೋಷಿಸುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಪತ್ರ ಸಂಖ್ಯೆ: ಇಡಿ/107/ಯುಎನ್ಇ/2020 ದಿನಾಂಕ:13.03.2020.

*****

ವಿಶ್ವದಾದ್ಯಂತ ಅತ್ಯಂತ ಮಾರಕವಾಗಿ ಪರಿಣಮಿಸಿರುವ CORONA VIRUS/COVID-19 ರೋಗವು ಸಾಂಕ್ರಾಮಿಕವಾಗಿ ಹರಡುತ್ತಿದ್ದು, ಈ ಬಗ್ಗೆ ಕರ್ನಾಟಕ ಸರ್ಕಾರವು CORONA VIRUS ರೋಗವನ್ನು ಸಾಂಕ್ರಾಮಿಕ ರೋಗವೆಂದು ಘೋಷಿಸಿರುವ ಹಿನ್ನೆಲೆಯಲ್ಲಿ ಇಲಾಖಾ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಸರ್ಕಾರಿ/ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ದಿನಾಂಕ:14-03-2020 ರಿಂದ ದಿನಾಂಕ:28--03-2020ರವರೆಗೆ 15 ದಿವಸಗಳಿಗೆ ರಜೆ ಘೋಷಿಸಲಾಗಿದೆ.

ಪ್ರಸ್ತುತ ವಿಧಾನಸಭೆ ಮತ್ತು ವಿಧಾನ ಪರಿಷತ್ ಅಧಿವೇಶನದ ಕಾರ್ಯಕಲಾಪಗಳು ನಡೆಯುತ್ತಿರುವುದರಿಂದ ಖಾಯಂ ಬೋಧಕ / ಬೋಧಕೇತರ ಸಿಬ್ಬಂದಿಗಳ ರಜೆಯ ಬಗ್ಗೆ ಮುಂದೆ ತಿಳಿಸಲಾಗುವುದು ಹಾಗೂ ಬೋಧನಾ ಕಾರ್ಯಭಾರ ಇಲ್ಲದೆ ಇರುವುದರಿಂದ ಅತಿಥಿ ಉಪನ್ಯಾಸಕರುಗಳು ಕಾಲೇಜಿನ ಕರ್ತವ್ಯಕ್ಕೆ ಹಾಜರಾಗುವ ಅವಶ್ಯಕತೆ ಇರುವುದಿಲ್ಲ.

**(ಕರಡು ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)**

13/3/2020

**ಕಾಲೇಜು ಶಿಕ್ಷಣ ನಿರ್ದೇಶಕರು**

**ಇವರಿಗೆ:**

1. ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರು- ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.

**ಪ್ರತಿಯನ್ನು:**

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಮಂಗಳೂರು, ಶಿವಮೊಗ್ಗ, ಧಾರವಾಡ, ಕಲಬುರಗಿ- ತಮ್ಮ ಕಛೇರಿಯ ವ್ಯಾಪ್ತಿಗೆ ಬರುವ ಎಲ್ಲಾ ಸರ್ಕಾರಿ/ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಕಾರ್ಯಕ್ರಮ ಅರಿವು ಮೂಡಿಸಲು ಸೂಚಿಸಲಾಗಿದೆ.
2. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು- ಇಲಾಖಾ ವೆಬ್ ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.
3. ಕಛೇರಿ ಪ್ರತಿ.